# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾವೇರಿ

## ನೇಮಕಾತಿ ಅಧಿಸೂಚನೆ ಸಂಖ್ಯೆ :02/2017, ದಿನಾಂಕ:10/01/2017.

**ವಿಷಯ:** **ಜವಾನ ಹುದ್ದೆಗಳ ನೇರ ನೇಮಕಾತಿ ಮಾಡಲು ಅಧಿಸೂಚನೆ ಹೊರಡಿಸುವ ಕುರಿತು.**

**ಉಲ್ಲೇಖ:** 1. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆ: ಎಲ್‌ಎಸಿ-2 128/2012, ದಿನಾಂಕ: 21-01-2013.

2. ಸರ್ಕಾರಿ ಆದೇಶ ಸಂಖ್ಯೆ: ಲಾ 137 ಎಲ್‌ಸಿಇ 2014, ಬೆಂಗಳೂರು ದಿನಾಂಕ 28-03-2016.

******

ಹಾವೇರಿ ಜಿಲ್ಲೆಯ ಅಧೀನ ನ್ಯಾಯಾಲಯಗಳಲ್ಲಿ ಖಾಲಿ ಇರುವ "ಜವಾನ" ಹುದ್ದೆಗಳಿಗೆ ನಿಗದಿತ ನಮೂನೆಯಲ್ಲಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದ್ದು, ಇಚ್ಛೆಯುಳ್ಳ ಅಭ್ಯರ್ಥಿಗಳು ಅರ್ಜಿ ನಮೂನೆಯ ಎಲ್ಲ ಅಂಕಣಗಳನ್ನು ಭರ್ತಿ ಮಾಡಿ ಅರ್ಜಿಯ ಜೊತೆಗೆ ದಾಖಲಾತಿಗಳ ಸ್ವಯಂ ದೃಢೀಕೃತ ನಕಲುಗಳನ್ನು ಲಗತ್ತಿಸಿ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹಾವೇರಿ, ಈ ವಿಳಾಸಕ್ಕೆ ನಿಗದಿತ ಅವಧಿಯೊಳಗಾಗಿ ಸಲ್ಲಿಸತಕ್ಕದ್ದು.

**ಅರ್ಜಿಗಳನ್ನು ಸ್ವೀಕರಿಸಲು ಕೊನೆಯ ದಿನಾಂಕ: 16-02-2017**

**ಸಾಯಂಕಾಲ 05-45 ಗಂಟೆಯವರೆಗೆ**

**ವಿ.ಸೂಚನೆ:**

1. ಅರ್ಜಿಗಳು ಕಡ್ಡಾಯವಾಗಿ ನಿಗಧಿತ ನಮೂನೆಯಲ್ಲಿಯೇ ಇರಬೇಕು.
2. ಅರ್ಜಿಯನ್ನು ಈ ಕಚೇರಿಯಿಂದ ಮಾರಾಟ ಮಾಡಲಾಗುವುದಿಲ್ಲ, ಈ ಕಚೇರಿಯ ವೆಬ್‌ಸೈಟ್ http://ecourts.gov.in/india/karnataka/haveri/recruitment ಇಂದ ಪ್ರತಿ ತೆಗೆದುಕೊಂಡು ಅರ್ಜಿ ಸಲ್ಲಿಸಬಹುದು.

**ಹುದ್ದೆಗಳ ಸಂಖ್ಯೆ: 19**

| ಮೀಸಲಾತಿ | ರೋಸ್ಟರ್ ಬಿಂದು | | ವರ್ಗೀಕರಣ | | | | | |
|---|---|---|---|---|---|---|---|---|
| | ನೇರ ಮೀಸಲಾತಿ | ಸಮತಳ ಮೀಸಲಾತಿ | ಮಹಿಳೆ | ಗ್ರಾಮೀಣ | ಮಾ.ಸೈ | ಇತರೆ | ಅಂಗವಿಕಲ | ಒಟ್ಟು |
| ಸಾಮಾನ್ಯ ಅಭ್ಯರ್ಥಿ | 98, 100, 2, 4, 6, 8, 10, 12, 14 | 9, 10, 1, 2, 3, 4, 5, 6, 7 | 2 | 3 | 1 | 2 | 1 | **9** |
| ಪರಿಶಿಷ್ಟ ಜಾತಿ | 1, 9, 15 | 1, 2, 3 | 1 | 1 | | 1 | | **3** |
| ಪರಿಶಿಷ್ಟ ಪಂಗಡ | 3 | 1 | | | | 1 | | **1** |
| ಪ್ರವರ್ಗ-೧ | 5 | 1 | | | | 1 | | **1** |
| ಪ್ರವರ್ಗ-೨ಎ | 97, 7, 13 | 15, 1, 2 | 2 | | | 1 | | **3** |
| ಪ್ರವರ್ಗ-೨ಬಿ | 11 | 1 | | | | 1 | | **1** |
| ಪ್ರವರ್ಗ-೩ಬಿ | 99 | 5 | 1 | | | | | **1** |
| ಒಟ್ಟು | | | 6 | 4 | 1 | 7 | 1 | **19** |

**ವೇತನ ಶ್ರೇಣಿ :** 9600-200-12000-250-13000-300-14200-350-14550/- ಮತ್ತು ಇತರೆ ಭತ್ಯೆಗಳು

**ವಿದ್ಯಾರ್ಹತೆ :** ಕನ್ನಡ ಮಾಧ್ಯಮದಲ್ಲಿ 7ನೇ ತರಗತಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. ಅರ್ಜಿಯ ಜೊತೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೇಲು ರುಜು ಇರುವ ಅಂಕಪಟ್ಟಿಯ ನೆರಳಚ್ಚು ಪ್ರತಿಯನ್ನು ಕಡ್ಡಾಯವಾಗಿ ಲಗತ್ತಿಸಬೇಕು. ಕೈ ಬರಹದ ಅಂಕಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ, ಅಂಕಪಟ್ಟಿಗಳು ಕಡ್ಡಾಯವಾಗಿ ಮುದ್ರಿತ ಪ್ರತಿಗಳಾಗಿರಬೇಕು.

**ಆಯ್ಕೆ ವಿದಾನ :** 7ನೇ ತರಗತಿಯಲ್ಲಿ ಪಡೆದ ಗರಿಷ್ಠ ಅಂಕಗಳ ಅರ್ಹತೆಯ ಆಧಾರದ ಮೇಲೆ 01 ಹುದ್ದೆಗೆ 10 ಅಭ್ಯರ್ಥಿಗಳಂತೆ ಅತಿ ಹೆಚ್ಚು ಅಂಕ ಪಡೆದ ಅಭ್ಯರ್ಥಿಗಳನ್ನು ಪ್ರಕಟಿಸಿದ ಹುದ್ದೆಗಳಿಗೆ ಅನುಗುಣವಾಗಿ ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

ಟಿಪ್ಪಣಿಃ ಸಂದರ್ಶನವು 10 ಅಂಕಗಳನ್ನೊಳಗೊಂಡಿರುತ್ತದೆ.

ಪರಿಶಿಷ್ಟ ಜಾತಿ, ಪರಿಶಿಷ್ಠ ಪಂಗಡ ಹಾಗೂ ಹಿಂದುಳಿದ ವರ್ಗಗಳಲ್ಲಿ, ಮಹಿಳಾ ಅಭ್ಯರ್ಥಿಗಳು, ಮಾಜಿ ಸೈನಿಕ ಅಭ್ಯರ್ಥಿಗಳು, ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ಗ್ರಾಮೀಣ ಅಭ್ಯರ್ಥಿಗಳು ಹಾಗೂ ಕನ್ನಡ ಮಾಧ್ಯಮ ಅಭ್ಯರ್ಥಿಗಳು ಮೀಸಲಾತಿಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಿರದೇ ಇದ್ದ ಪಕ್ಷದಲ್ಲಿ, ಆ ಹುದ್ದೆಗಳನ್ನು ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು. ಆಯಾ ಪಂಗಡಗಳ ಇತರೆ ಅಭ್ಯರ್ಥಿಗಳೂ ಸಹ ಲಭ್ಯವಾಗದಿದ್ದಲ್ಲಿ, **ಪರಿಶಿಷ್ಟ ಜಾತಿ, ಪರಿಶಿಷ್ಠ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಆಯಾ ಪ್ರವರ್ಗಗಳ ಅರ್ಹ ಅಭ್ಯರ್ಥಿಗಳ ಲಭ್ಯತೆಯ ಕೊರತೆಯಿಂದಾಗಿ ಭರ್ತಿ ಮಾಡಲಾಗದ ರಿಕ್ತ ಸ್ಥಾನಗಳನ್ನು ಬ್ಯಾಕ್‌ಲಾಗ್ ಎಂದು ಪರಿಗಣಿಸಿ ಮುಂದಕ್ಕೆ ಕೊಂಡೊಯ್ಯಲಾಗುವುದು.**

ಸಂದರ್ಶನಕ್ಕೆ ಆಯ್ಕೆಯಾಗುವ ಎಲ್ಲಾ ಅಭ್ಯರ್ಥಿಗಳು ಸಂದರ್ಶನಕ್ಕೆ ಕರೆದಾಗ ಹಾವೇರಿಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಚೇರಿಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

**ವಯೋಮಿತಿಃ** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು ಈ ಕೆಳಕಂಡ ವಯೋಮಿತಿಯನ್ನು ಹೊಂದಿರತಕ್ಕದ್ದು.

1. ಕನಿಷ್ಠ ವಯೋಮಿತಿ 18 ವರ್ಷ
2. ಗರಿಷ್ಠ ವಯೋಮಿತಿ

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| ಪ್ರವರ್ಗ 2ಎ, 2ಬಿ, 3ಎ, 3ಬಿ | 38 ವರ್ಷ |
| ಪ. ಜಾತಿ, ಪ. ಪಂಗಡ, ಪ್ರವರ್ಗ 1 | 40 ವರ್ಷ |

ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಗರಿಷ್ಠ ವಯಸ್ಸನ್ನು ಮೀರಿರಕೂಡದು.

**ವಯೋಮಿತಿ ಸಡಲಿಕೆಃ**

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಠ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

1. ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ ಗರಿಷ್ಠ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸಲ್ಲಿಸಿದ್ದರೋ ಅಷ್ಟು ವರ್ಷಗಳ ಅಥವಾ 10 ವರ್ಷಗಳ ಅವಧಿ, ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಲಿಕೆಯನ್ನು ನೀಡಲಾಗುವುದು.
2. ಅಭ್ಯರ್ಥಿಯು ಮಾಜಿ ಸೈನಿಕನಾಗಿದಲ್ಲಿ, ಅವನು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವನೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.
3. ಅಭ್ಯರ್ಥಿಯು ಅಂಗವಿಕಲನಾಗಿದಲ್ಲಿ, ವಿಧವೆಯಾಗಿದಲ್ಲಿ ಮತ್ತು ಜೀತ ಕಾರ್ಮಿಕನಾಗಿದಲ್ಲಿ 10 ವರ್ಷಗಳು.
4. ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದ ಪಕ್ಷದಲ್ಲಿ ಗರಿಷ್ಠ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿರುವರೊ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೆ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.
5. ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ ಅಂತಹ ಕೆಡೆಟ್ ಪರೀಕ್ಷಕನಾಗಿ ಸೇವೆ ಸಲ್ಲಿಸಿದ್ದಷ್ಟು ವರ್ಷಗಳು.
6. ಅಭ್ಯರ್ಥಿಗಳು ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮಸಮೂಹ ಪರಿಶೀಲಕರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮ ಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದ ವರ್ಷಗಳು.

**ಪರಿವೀಕ್ಷಣಾ ಅವಧಿಃ** ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು) 1977ರ ಪ್ರಕಾರ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ.

**ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ವಿಧಾನಃ**

ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ತಮ್ಮ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣಪತ್ರವನ್ನು ನಿಗದಿತ ದಿನಾಂಕದೊಳಗೆ ಪಡೆದು, ಅರ್ಜಿಗಳನ್ನು ಸಂಬಂಧಿತ ನೇಮಕಾತಿ ಪ್ರಾಧಿಕಾರದ ಮೂಲಕ ಕಳುಹಿಸಬೇಕು.

## ಅರ್ಜಿ ಸಲ್ಲಿಸುವ ವಿಧಾನಃ

ಅಧಿಸೂಚನೆಯ ಪ್ರತಿಯನ್ನು ಹಾಗೂ ನಿಗದಿತ ಅರ್ಜಿ ನಮೂನೆಯನ್ನು ಜಿಲ್ಲಾ ನ್ಯಾಯಾಲಯದ ಅಂತರ್ಜಾಲದ ವಿಳಾಸ http://ecourts.gov.in/india/karnataka/haveri/recruitment ಇಂದ ಪಡೆದು, ತಮ್ಮ ಸ್ವಂತ ಕೈಬರಹದಲ್ಲಿ ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು. ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸಿ, ಅದರ ಮೇಲೆ ಸಹಿ ಮಾಡುವುದು ಹಾಗೂ ಅರ್ಜಿ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ ಮಾಡುವುದು. ಹುದ್ದೆಗೆ ಸಂಬಂಧಿಸಿದ ವಿದ್ಯಾರ್ಹತೆ, ವಯಸ್ಸು ಮತ್ತು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಅಧಿಕೃತ ಅಧಿಕಾರಿಗಳಿಂದ ಪಡೆದು, ಅವುಗಳ ನಕಲು ಪ್ರತಿಗಳನ್ನು ಸ್ವಯಂ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅರ್ಜಿಯನ್ನು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಹಾವೇರಿ ಇವರಿಗೆ ದಿನಾಂಕ **16-02-2017** ರ ಸಂಜೆ **5-45** ಗಂಟೆಯೊಳಗೆ ತಲುಪುವಂತೆ ಕಳುಹಿಸುವುದು. ಅರ್ಜಿಯನ್ನು ಕಳುಹಿಸುವ ಲಕೋಟೆಯ ಮೇಲೆ ಅಭ್ಯರ್ಥಿಯು **"ಜವಾನ ಹುದ್ದೆಗೆ"** ಎಂದು ಕಡ್ಡಾಯವಾಗಿ ನಮೂದಿಸುವುದು.

## ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳುಃ

1. ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ.
2. ಜನ್ಮ ದಿನಾಂಕದ ದೃಡೀಕರಣಕ್ಕಾಗಿ ವರ್ಗಾವಣೆ ಪ್ರಮಾಣ ಪತ್ರ / ಕ್ಯುಮುಲೇಟಿವ್ ರೇಕಾರ್ಡ್/ ಎಸ್.ಎಸ್.ಎಲ್.ಸಿ ಅಂಕಪಟ್ಟಿ.
3. ವಿದ್ಯಾರ್ಹತೆ ಬಗ್ಗೆ ಅಂಕಪಟ್ಟಿಗಳು.
4. ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗಿರುವ ಹಾಗೂ ಅರ್ಜಿದಾರರಿಗೆ ಸಂಬಂಧಿಕರಲ್ಲದ ಇಬ್ಬರು ಗಣ್ಯ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.
5. ಅರ್ಜಿಯ ಜೊತೆ ಅಭ್ಯರ್ಥಿಯು ಅಭ್ಯಸಿಸಿದ ಶಾಲೆ / ವಿದ್ಯಾಲಯದಿಂದ ಪಡೆದ ಒಂದು ನಡತೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
6. ಪರಿಶಿಷ್ಟ ಜಾತಿ / ಪರಿಶಿಷ್ಠ ಪಂಗಡ ಅಭ್ಯರ್ಥಿಗಳು ನಮೂನೆ 'ಡಿ'ಯಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ 'ಇ'ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ

ಅಭ್ಯರ್ಥಿಗಳು ನಮೂನೆ ಎಫ್‌ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದು ಸಲ್ಲಿಸಬೇಕು.

7. ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ:ಸಿಆಸುಇ/96/ಸೇನನಿ/2005, ದಿನಾಂಕಃ 10-8-2005ರ ಪ್ರಕಾರ ನಿಗಧಿತ ನಮೂನೆ-2ರಲ್ಲಿ ಅಧಿಕೃತ ಅಧಿಕಾರಿಗಳಿಂದ ಪಡೆದು ಅದನ್ನು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿ ಸಲ್ಲಿಸಬೇಕು. ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಠ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳು ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.
8. ಗ್ರಾಮೀಣ ಮೀಸಲಾತಿಯನ್ನು ಕೋರುವ ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪ್ರಮಾಣ ಪತ್ರ ನಮೂನೆ-2ರ ಜೊತೆ ನಮೂನೆ-1ರಲ್ಲೂ ದೃಢೀಕರಣ ಪತ್ರವನ್ನು ಸಲ್ಲಿಸುವುದು.
9. ಕನ್ನಡ ಮಾಧ್ಯಮ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ನಿಗಧಿತ ನಮೂನೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರಶಿಕ್ಷಣಾಧಿಕಾರಿಗಳ ಮೇಲುರುಜು ಇರುವ ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸುವುದು.
10. ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ 19.11.2005ರ ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ/115/ಸೇನನಿ/2005 ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣಪತ್ರವನ್ನು ಪಡೆದು ಸಲ್ಲಿಸಬೇಕು.
11. ಯೋಜನಾ ನಿರಾಶ್ರಿತ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ/44/ಸೇನನಿ/2001ರ ದಿನಾಂಕಃ 27-7-2001ರಲ್ಲಿ ನಿಗದಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು.
12. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ /ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣ ಪತ್ರವನ್ನು ಸಲ್ಲಿಸುವುದು.
13. ವಿದವೆಯರು, ಜೀತ ಕಾರ್ಮಿಕರು ಮತ್ತು ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರವನ್ನು ಸಲ್ಲಿಸುವುದು.

**ವಿಶೇಷ ಸೂಚನೆಃ**

- ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣ ಪತ್ರಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದು ಲಗತ್ತಿಸಿರಬೇಕು ಇಲ್ಲವೇ ಕೊನೆಯ ದಿನಾಂಕದಂದು ಸಿಂಧುವಾಗಿರಬೇಕು ಮತ್ತು ಕಡ್ಡಾಯವಾಗಿ ಸ್ವಯಂ ದೃಡೀಕರಿಸಿರಬೇಕು.
- ಅಭ್ಯರ್ಥಿಯು ವ್ಯಾಸಂಗ ಮಾಡಿದ ಶಾಲೆಯಿಂದ ಮುಖ್ಯೋಪಾದ್ಯಾಯರಿಂದ ಸಹಿ ಹಾಗೂ ಸಂಬಂಧಪಟ್ಟ ಕ್ಷೇತ್ರಶಿಕ್ಷಣಾಧಿಕಾರಿಯವರಿಂದ ಮೇಲುರುಜು ಪಡೆದ 7ನೇ ತರಗತಿಯ ಅಂಕಪಟ್ಟಿಯ ಮೇಲೆ ನಕಲು ಪ್ರತಿಯನ್ನು ಸ್ವಯಂ ದೃಡೀಕರಿಸಿ ಲಗತ್ತಿಸಬೇಕು.

- ಅರ್ಜಿ ನಮೂನೆಯಲ್ಲಿ ಅಭ್ಯರ್ಥಿಯ ಖಾಯಂ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು. ಒಂದು ವೇಳೆ ಅಭ್ಯರ್ಥಿಯ ವಿಳಾಸ ಬದಲಾವಣೆಯಾದಲ್ಲಿ ತಕ್ಷಣವೇ ಈ ಕಚೇರಿಗೆ ಮಾಹಿತಿ ತಿಳಿಸಬೇಕು. ತಪ್ಪಿದಲ್ಲಿ ಮುಂದಿನ ಪತ್ರ ವ್ಯವಹಾರಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರು.
- **7ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ (Grade), ಅದನ್ನು ಅಂಕಗಳಾಗಿ ಪರಿವರ್ತಿಸಿ, ಗರಿಷ್ಠ ಅಂಕಗಳು ಮತ್ತು ಪಡೆದ ಅಂಕಗಳ ಒಟ್ಟು ಶೇಕಡಾವಾರು ನಮೂದ ಇರಬೇಕು ಮತ್ತು ಅಂಕಪಟ್ಟಿಯನ್ನು ಕಡ್ಡಾಯವಾಗಿ ಸಕ್ಷಮ ಪ್ರಾಧಿಕಾರದಿಂದ ಪಡೆದು ಸಲ್ಲಿಸಬೇಕು.**
- **ಅಂಕಪಟ್ಟಿಯಲ್ಲಿ ತ್ರೈಮಾಸಿಕ ಅಂಕಗಳಲ್ಲಿದ್ದರೆ, ಎಲ್ಲಾ ತ್ರೈಮಾಸಿಕ ಅಂಕಗಳನ್ನು ಕ್ರೋಢಿಕರಿಸಿ ಅಂಕಪಟ್ಟಿಯನ್ನು ಸಲ್ಲಿಸಬೇಕು.**
- ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ದಿನಾಂಕವು ಸಾರ್ವಜನಿಕ ರಜೆಯಾಗಿದ್ದರೆ ಮುಂದಿನ ಕಚೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಎಂದು ತಿಳಿಯುವುದು.
- ಈ ಅಧಿಸೂಚನೆಯು ಚಾಲ್ತಿಯಲ್ಲಿರುವ ಮತ್ತು ಕಾಲ-ಕಾಲಕ್ಕೆ ಸರ್ಕಾರದಿಂದ ಹೊರಡಿಸಲ್ಪಡುವ ಆದೇಶಗಳಿಗೆ ಒಳಪಟ್ಟಿರುತ್ತದೆ.
- ಯಾವುದೇ ಅಭ್ಯರ್ಥಿಯು ಸಂದರ್ಶನದ ಬಗ್ಗೆ ಮಾಹಿತಿ ಬರದಿದ್ದರೆ, ಅವರು ಸಂದರ್ಶನಕ್ಕೆ ಅರ್ಹರಲ್ಲ ಎಂದು ತಿಳಿಯುವುದು ಮತ್ತು ಈ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಮಾಡಲಾಗುವುದಿಲ್ಲ.

ಈ ಮೇಲಿನ ಸೂಚನೆಗಳಿಗೆ ಅನುಸಾರವಾಗಿ ದಾಖಲೆಗಳನ್ನು ಒದಗಿಸಲು ತಪ್ಪಿದಲ್ಲಿ, ಅಂತಹ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು.

ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

ಸ್ಥಳ: ಹಾವೇರಿ
ದಿನಾಂಕ: 10/01/2017

**(ಈಶಪ್ಪಾ ಕೆ. ಭೂತೆ)**
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಹಾವೇರಿ

## ಅರ್ಜಿ ನಮೂನೆ

ಸ್ವದೃಢೀಕರಿಸಿದ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅಂಟಿಸಬೇಕು

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಹಾವೇರಿ – ಇವರಿಗೆ

ಮಾನ್ಯರೇ,

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಅಧಿಸೂಚನೆ ಸಂಖ್ಯೆಃ 02/2017 ದಿನಾಂಕಃ10/01/2017 ರ ಪ್ರಕಾರ ನಾನು ಕೆಳಕಂಡ ಮಾಹಿತಿಗಳೊಂದಿಗೆ ಜವಾನ ಹುದ್ದೆಗೆ ಈ ಮೂಲಕ ನನ್ನ ವಿವರಗಳೊಂದಿಗೆ ಅರ್ಜಿ ಸಲ್ಲಿಸುತ್ತಿದ್ದೇನೆ.

| | | | | |
|---|---|---|---|---|
| 01 | ಅಭ್ಯರ್ಥಿಯ ಹೆಸರು | | | |
| 02 | ತಂದೆ / ಗಂಡನ ಹೆಸರು | | | |
| 03 | ತಾಯಿಯ ಹೆಸರು | | | |
| 04 | ಜನ್ಮ ದಿನಾಂಕ | | | |
| 05 | ವಯಸ್ಸು (ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಅಭ್ಯರ್ಥಿಯ ವಯಸ್ಸು) | ವರ್ಷಗಳು | ತಿಂಗಳುಗಳು | ದಿನಗಳು |
| | | | | |
| 06 | ಅಭ್ಯರ್ಥಿಯ ಖಾಯಂ ವಿಳಾಸ | | | |
| 07 | ಲಿಂಗ | ಪುರುಷ / ಮಹಿಳೆ | | |
| 08 | ರಾಷ್ಟ್ರೀಯತೆ ಮತ್ತು ಧರ್ಮ | | | |
| 09 | ಜಾತಿ / ಉಪಜಾತಿ | | | |
| 10 | ವಿವಾಹಿತರಾದಲ್ಲಿ ಒಬ್ಬರಿಗಿಂತ ಹೆಚ್ಚು ಜೀವಂತ ಗಂಡ ಅಥವಾ ಹೆಂಡತಿ ಇದ್ದಾರೆಯೆ? | | | |
| 11 | ನೀವು ಯಾವುದಾದರೂ ಕ್ರಿಮಿನಲ್ ಮೊಕದ್ದಮೆಯಲ್ಲಿ ಭಾಗಿಯಾಗಿದ್ದೀರೋ? | | | |

| | | | | | | |
|---|---|---|---|---|---|---|
| 12 | ನೀವು ಸರ್ಕಾರಿ ಸೇವೆಯಿಂದ ಅಥವಾ ಇನ್ನಾವುದಾದರೂ ಸೇವೆಯಿಂದ ವಜಾ ಆಗಿದ್ದೀರ ಅಥವಾ ತೆಗೆದುಹಾಕಲ್ಪಟ್ಟಿದ್ದೀರಾ? | | | | | |
| 13 | ನೀವು ಪ್ರಸ್ತುತ ಸರ್ಕಾರಿ ಸೇವೆಯಲ್ಲಿರುವಿರಾ? (ಸರ್ಕಾರಿ ಸೇವೆಯಲ್ಲಿದ್ದಲ್ಲಿ, ನೇಮಕಾತಿ ಪ್ರಾಧಿಕಾರದಿಂದ ಪಡೆದ ನಿರಾಕ್ಷೇಪಣಾ ಪತ್ರದ ಪ್ರತಿಯನ್ನು ಕಡ್ಡಾಯವಾಗಿ ಲಗತ್ತಿಸಬೇಕು) | ಹೌದು ( ) | | ಇಲ್ಲ ( ) | | |
| 14 | ಕೋರುವ ಮೀಸಲಾತಿಗಳು (ಕೋರುವ ಮೀಸಲಾತಿಯನ್ನು ✓ ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು) | ಸಾಮಾನ್ಯ | ಪ್ರ. ಜಾತಿ | ಪ್ರ.ಪಂಗಡ | ಪ್ರವರ್ಗ-1 | |
| | | | | | | |
| 15 | | 2-ಎ | 2-ಬಿ | 3-ಎ | 3-ಬಿ | |
| | | | | | | |
| 16 | ನೀವು ಈ ಯಾವುದಾದರೂ ಮೀಸಲಾತಿ ಅಡಿಯಲ್ಲಿ ಬರುತ್ತೀರ? (ಸೇರುವ ಮೀಸಲಾತಿಯನ್ನು ✓ ಚಿಹ್ನೆ ಹಾಕುವುದರ ಮೂಲಕ ಗುರುತಿಸಿ ಪ್ರಮಾಣಪತ್ರದ ಸ್ವಯಂ ದೃಢೀಕೃತ ನಕಲನ್ನು ಲಗತ್ತಿಸಬೇಕು) | ಗ್ರಾಮೀಣ | ಕ.ಮಾ.ಅ | ಮಾ.ಸೈ | ಅಂ. ಅ | ಯೋ.ನಿ.ಅ |
| | | | | | | |
| 17 | ಶೈಕ್ಷಣಿಕ ವಿದ್ಯಾರ್ಹತೆ (ಸ್ವಯಂ ದೃಢೀಕೃತ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು) | ಉತ್ತೀರ್ಣ ಹೊಂದಿದ ವರ್ಷ | ಗರಿಷ್ಟ ಅಂಕಗಳು | ಗಳಿಸಿದ ಅಂಕಗಳು | ಶೇಕಡಾವಾರು ಅಂಕಗಳು | |
| | 7ನೇ ತರಗತಿ | | | | | |
| 18 | ಇತರೆ ಯಾವುದೇ ವಿದ್ಯಾರ್ಹತೆ | | | | | |

ಸೂಚನೆಃ ಅಭ್ಯರ್ಥಿಗಳು ಎಲ್ಲಾ ಕಾಲಂಗಳನ್ನು ಕಡ್ಡಾಯವಾಗಿ ಭರ್ತಿ ಮಾಡತಕ್ಕದ್ದು.

ಈ ಮೇಲೆ ನಮೂದಿಸಿರುವ ಮಾಹಿತಿ ಮತ್ತು ವಿವರಗಳು ಸತ್ಯವಾಗಿದ್ದು ಒಂದು ವೇಳೆ ಅವು ಅಸತ್ಯವೆಂದು ಕಂಡು ಬಂದಲ್ಲಿ ತಾವು ತೆಗೆದುಕೊಳ್ಳುವ ತೀರ್ಮಾನಗಳಿಗೆ ಬದ್ಧನಾಗಿರುತ್ತೇನೆ / ಬದ್ಧಳಾಗಿಳುತ್ತೇಳೆ.

ಸ್ಥಳಃ ಅಭ್ಯರ್ಥಿಯ ಸಹಿ

ದಿನಾಂಕಃ